ಉತ್ತರ

ಅ) ಬಂದಿದೆ

ಆ, ಇ) ೨೦೦೭–೦೮ನೇ ಸಾಲಿನಲ್ಲಿ ಅನುದಾನದ ಲಭ್ಯತೆಯ ಆಧಾರದ ಮೇಲೆ ಕೆರೆಗಳ ಹೂಳೆತ್ತುವ ಕಾರ್ಯಕ್ರಮ ಕೈಗೆತ್ತಿಕೊಳ್ಳಲಾಗುವುದು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : ೧೮೫೭ (೨೪೨೭)

ಸದಸ್ಯರ ಹೆಸರು : ಶ್ರೀ ಹೆಚ್. ನಿಂಗಪ್ಪ (ಕುಣಿಗಲ್)

ಉತ್ತರಿಸುವವರು : ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು)

ಪ್ರಶ್ನೆ

ಅ) ತುಮಕೂರು ಜಿಲ್ಲೆಯಲ್ಲಿ ಬರದ ತೀವ್ರತೆಗನುಗುಣವಾಗಿ ಬರಪರಿಹಾರದ ಕಾರ್ಯಕ್ರಮ ಕೈಗೊಳ್ಳದೆ ಹಾಲಿ ಪರಿಸ್ಥಿತಿ ಮೇಲೆ ಕೈಗೆತ್ತಿಕೊಂಡಿರುವ ಪ್ರಮಾಣ ತೀರ ಕಡಿಮೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಗಮನಕ್ಕೆ ಬಂದಿದ್ದಲ್ಲಿ, ಇನ್ನೂ ಹೆಚ್ಚಿನ ಬರ ಪರಿಹಾರದ ಕೆಲಸ ಕೈಗೆತ್ತಿಕೊಂಡು ಶೀಘ್ರಗತಿಯಲ್ಲಿ ಪೂರೈಸಲು ಸರ್ಕಾರ ಕ್ರಮ ಕೈಗೊಳ್ಳುವುದೇ .

ಇ) ಹಾಲಿ ಕೈಗೆತ್ತಿಕೊಂಡಿರುವ ಬರ ಪರಿಹಾರದ ಕೆಲಸ ಕಾರ್ಯಗಳು ನಿಧಾನಗತಿಯಲ್ಲಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಈ) ಬಂದಿದ್ದಲ್ಲಿ ಬರಪರಿಹಾರದ ಕಾಮಗಾರಿಗಳು ಚುರುಕಾಗಿ ನಡೆಯಲು ಸರ್ಕಾರ ಯಾವ ರೀತಿ ಕ್ರಮ ಕೈಗೊಳ್ಳುವುದು ?

ಉತ್ತರ

ಅ) ಇಲ್ಲ

ಆ) ತುಮಕೂರು ಜಿಲ್ಲೆಯಲ್ಲಿ ಒಟ್ಟು ೧೦ ತಾಲ್ಲೂಕುಗಳನ್ನು ಬರಪೀಡಿತವೆಂದು ಘೋಷಿಸಿ ಈ ತಾಲ್ಲೂಕುಗಳಲ್ಲಿ ಬರ ಪರಿಹಾರ ಕಾರ್ಯಕ್ಕೆಗೊಳ್ಳಲು ತುಮಕೂರು ಜಿಲ್ಲೆಗೆ ಒಟ್ಟು ರೂ.೨೦.೦೦ ಕೋಟಿ ಹಣ ಬಿಡುಗಡೆ ಮಾಡಿದೆ. ಈ ಅನುದಾನಕ್ಕೆ ತಕ್ಕಂತೆ ವಿಧಾನ ಸಭೆ ಸದಸ್ಯರ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮಟ್ಟದ ಸಮಿತಿಗಳಿಂದ ಬಂದಿದ್ದ ಕ್ರಿಯಾ ಯೋಜನೆಗಳಿಗೆ ಮಂಜೂರಾತಿ ನೀಡಲಾಗಿದೆ.

ಇ) ತುಮಕೂರು ಜಿಲ್ಲೆಯಲ್ಲಿ ೧೨೯೮ ಬರಪರಿಹಾರ ಕಾಮಗಾರಿ ಪ್ರಾರಂಭಿಸಿ ೯೨೫ ಕಾಮಗಾರಿಗಳು ಪೂರ್ಣಗೊಂಡು ೩೬೩ ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ. ತುಮಕೂರು ಜಿಲ್ಲೆಯಲ್ಲಿ ಕೈಗೆತ್ತಿಕೊಂಡಿರುವ ಪರಿಹಾರ ಕಾಮಗಾರಿಗಳು ಬಹುತೇಕ ಪೂರ್ಣಗೊಂಡಿದ್ದು, ಎಲ್ಲ ಕಾಮಗಾರಿಗಳನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಸೂಚಿಸಿದೆ.

ಈ) ಬರಪರಿಹಾರ ಕಾಮಗಾರಿಗಳನ್ನು ತ್ವರಿತಗತಿಯಲ್ಲಿ ಸಂಪೂರ್ಣಗೊಳಿಸಲು ಜಿಲ್ಲಾ ಉಸ್ತುವಾರಿ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳಿಗೆ ಪ್ರತಿ ತಿಂಗಳು ಜಿಲ್ಲೆಗಳಿಗೆ ಭೇಟಿ ನೀಡಿ ಕಾಮಗಾರಿಗಳ ಸ್ಥಳ ಪರಿಶೀಲನೆ ನಡೆಸುವಂತೆ ನಿರ್ದೇಶನ ನೀಡಿದೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : ೧೮೫೮ (೧೪೭೧)

ಸದಸ್ಯರ ಹೆಸರು : ಶ್ರೀ ಎಸ್.ಎಸ್.ಪಾಟೀಲ್ (ಮುಂಡರಗಿ)

ಉತ್ತರಿಸುವವರು : ಶ್ರೀ ಬಿ.ಎಸ್.ಯಡಿಯೂರಪ್ಪ (ಉಪಮುಖ್ಯಮಂತ್ರಿಗಳು)

ಪ್ರಶ್ನೆ

ಅ) ಮುಂಡರಗಿ ತಾಲ್ಲೂಕು ಡಂಬಳ ನೀರಾವರಿ ಕೆರೆಯ ನೂತನ ಬಲದಂಡೆ ಶಾಖಾ ಕಾಲುವೆ ಕೆಲಸ ಪ್ರಾರಂಭವಾದದ್ದು ಯಾವಾಗ ;